RNU AIR DHARWAD

AUGUST 28, 2025

**AKASHAVANI - DHARWAD**

**PRADESH SAMACHARA (KANNADA) 12 PM**

**ಕೇಂದ್ರ ಸರ್ಕಾರದ ಸಾಮಾಜಿಕ** ನ್ಯಾಯ ಮತ್ತು ಸಬಲೀಕರಣ ಇಲಾಖೆ ಅಧೀನದಲ್ಲಿ 'ನಶಾ ಮುಕ್ತ ಭಾರತ' ಅಭಿಯಾನವು, ನಾಳೆ ಮೈಸೂರಿನಿಂದ ಆರಂಭಗೊಳ್ಳಲಿದೆ. ಬಂಡೀಪುರದಲ್ಲಿ ಮಾದಕ ವಸ್ತುಗಳ ವಿರುದ್ಧದ ಜಾಗೃತಿ ಅಭಿಯಾನದ ಅಂಗವಾಗಿ ಆಯೋಜಿತ ಬೈಕ್ ಜಾಥಾಗೆ ಚಾಲನೆ ಸಿಗಲಿದೆ. ಮೂರು ದಿನಗಳ ಕಾಲ ಜರುಗುವ ಬೈಕ್ ಜಾಥಾವು 31 ರಂದು ಬೀದರ್ ಜಿಲ್ಲೆಗೆ ತಲುಪಲಿದೆ ಎಂದು ರಾಜ್ಯ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಪ್ರಧಾನ ಕಾರ್ಯದರ್ಶಿ ನವೀನ ರಾಜ್ ಸಿಂಗ್ ತಿಳಿಸಿದ್ದಾರೆ.

ಒಟ್ಟು 20 ಜನ ಬೈಕ್ ಸವಾರರು, ವಿವಿಧ ಜಿಲ್ಲೆಗಳ ಮೂಲಕ ಸಾಗಿ ಶಾಲೆ, ಕಾಲೇಜುಗಳು ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ವ್ಯಸನ ಮುಕ್ತತೆ ಬಗ್ಗೆ ಜಾಗೃತಿ ಮೂಡಿಸಲಿದ್ದಾರೆ.

<><><>

**ಕೇಂದ್ರ ಸರ್ಕಾರದ,** ಉನ್ನತ ಶಿಕ್ಷಣ ಇಲಾಖೆ, ಕೊಡಮಾಡುವ 2025 ನೇ ಸಾಲಿನ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿಗೆ, ಬೆಂಗಳೂರು ಮೂಲದ, ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜಮೆಂಟ್, ಬೆಂಗಳೂರು–ಐಐಎಂಬಿ, ಉದ್ಯಮಶೀಲತೆ ವಿಭಾಗದ ಪ್ರಾಧ್ಯಾಪಕರಾದ ಶ್ರೀವರ್ಧಿನಿ ಝಾ ಆಯ್ಕೆಯಾಗಿದ್ದಾರೆ. ದೇಶದ ಉನ್ನತ ಶಿಕ್ಷಣ ಸಂಸ್ಥೆಗಳು ಹಾಗೂ ಪಾಲಿಟೆಕ್ನಿಕ್ ಗಳಿಂದ ಒಟ್ಟು 21 ಜನ ಶಿಕ್ಷಕರು ಪ್ರತಿಷ್ಠಿತ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಕರ್ನಾಟಕ ರಾಜ್ಯದಿಂದ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿಗೆ ಭಾಜನರಾದವರಲ್ಲಿ ಓರ್ವರಾದ ಶ್ರೀವರ್ಧಿನಿ ಝಾ ಅವರು, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ರಾಜ್ಯಾದ್ಯಂತ ಗಣೇಶೋತ್ಸವವನ್ನು ಸಂಭ್ರಮ ಹಾಗೂ ಸಡಗರದೊಂದಿಗೆ ಆಚರಿಸಲಾಗುತ್ತಿದೆ. ರಾಜ್ಯದ ವಿವಿಧ ನಗರ ಹಾಗೂ ಗ್ರಾಮಗಳಲ್ಲಿ ಸಾರ್ವಜನಿಕ ಗಣೇಶೋತ್ಸವ ಸಮಿತಿಗಳ ಅಧೀನದಲ್ಲಿ ಪ್ರತಿಷ್ಠಾಪಿಸಲಾದ ಗಣಪತಿ ಮೂರ್ತಿಗಳಿಗೆ ವಿಶೇಷ ಪೂಜೆ, ಪುನಸ್ಕಾರಗಳು ಜರುಗುತ್ತಿವೆ. ಹುಬ್ಬಳ್ಳಿಯ, ಮಂಗಳವಾರ ಪೇಟೆಯಲ್ಲಿ ಗಣೇಶೋತ್ಸವದ ಅಂಗವಾಗಿ ನಿರ್ಮಿಸಲಾದ, ಐತಿಹಾಸಿಕ ಶ್ರೀ ಕಾಶಿ ವಿಶ್ವನಾಥ ಮಾದರಿಯ ಜ್ಯೋತಿರ್ಲಿಂಗದ ಉದ್ಘಾಟನೆಯನ್ನು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ನೆರವೇರಿಸಿದರು. ರುದ್ರಾಕ್ಷಿಮಠದ ಪೂಜ್ಯರಾದ ಬಸವಲಿಂಗ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಹುಬ್ಬಳ್ಳಿ ರಾಣಿ ಚನ್ನಮ್ಮ ಮೈದಾನದಲ್ಲಿ ಪ್ರತಿಷ್ಠಾಪನೆಗೊಂಡ ಕೃಷ್ಣರೂಪಿ ಗಜಾನನ ನಿಗೆ ಗಂಗಾ ಆರತಿ ಮಾದರಿಯಲ್ಲಿ ಮಹಾಮಂಗಳಾರತಿ ನೆರವೇರಿತು.

<><><>

ಬೀದರ್ ಜಿಲ್ಲೆಯ ಔರಾದ ಹಾಗೂ ಕಮಲನಗರ ತಾಲೂಕುಗಳಲ್ಲಿ ವಾಡಿಕೆಗಿಂತ ಮಳೆ ಹೆಚ್ಚಾದ ಹಿನ್ನೆಲೆ ಕೃಷಿ ಬೆಳೆಗಳು ಹಾನಿಗೀಡಾಗಿದ್ದು, ಕೆಲವೆಡೆ ಸಾರ್ವಜನಿಕ ರಸ್ತೆ ಸಂಪರ್ಕ ಕಡಿತಗೊಂಡಿದೆ. ಹದಿನೈದು ದಿನಗಳ ಒಳಗೆ ಜಿಲ್ಲೆಯ ಬೆಳೆ ಹಾನಿ ಸಮೀಕ್ಷೆ ಪೂರ್ಣಗೊಳಿಸಿ, ವರದಿ ಸಲ್ಲಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. 6 ಪ್ರಮುಖ ರಸ್ತೆಗಳು, 10 ಸೇತುವೆಗಳು, 151 ವಿದ್ಯುತ್ ಕಂಬಗಳು ಹಾನಿಗೀಡಾಗಿದ್ದು, ರಸ್ತೆ ಪುನರ್ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

<><><>

**ಹೊಸದಿಲ್ಲಿಯ ಕೇಂದ್ರ ವಾರ್ತಾ ಶಾಖೆ,** ಯಾದಗಿರಿ ಜಿಲ್ಲಾಡಳಿತದ ಸಹಯೋಗದಲ್ಲಿ, ಕೇಂದ್ರ ಪುರಸ್ಕೃತ ಸಾಮಾಜಿಕ ಹಾಗೂ ಆರ್ಥಿಕ ಭದ್ರತಾ ಯೋಜನೆಗಳ ಕುರಿತು, ನಾಳೆ ವಾರ್ತಾಲಾಪ ಕಾರ್ಯಾಗಾರ ಆಯೋಜಿಸಿದೆ. ಸಂಸದ ಜಿ.ಕುಮಾರ ನಾಯಕ ಹಾಗೂ ಸಂಸದ ರಾಧಾಕೃಷ್ಣ ದೊಡ್ಡಮನಿ, ಕಾರ್ಯಾಗಾರ ಉದ್ಘಾಟಿಸಲಿದ್ದಾರೆ. ಕೇಂದ್ರ ವಾರ್ತಾ ಶಾಖೆಯ ಹೆಚ್ಚುವರಿ ಮಹಾನಿರ್ದೇಶಕ ಎಸ್.ಜಿ ರವೀಂದ್ರ ಸೇರಿದಂತೆ, ಗಣ್ಯರು, ಹಿರಿಯ ಪತ್ರಕರ್ತರು ಪಾಲ್ಗೊಳ್ಳಲಿದ್ದಾರೆ.

<><><>

**ಕೇಂದ್ರ ಸಾಹಿತ್ಯ ಅಕಾದೆಮಿ ಪ್ರಶಸ್ತಿ ಪುರಸ್ಕೃತ,** ಎಂ.ಎಂ ಕಲಬುರ್ಗಿ ಅವರ, 10 ನೇ ಹುತಾತ್ಮ ದಿನಾಚರಣೆ ಹಿನ್ನೆಲೆ, 30 ನೇ ತಾರೀಖು ಸಂಜೆ 5 ಗಂಟೆಗೆ, ಧಾರವಾಡದ ಆಲೂರ ವೆಂಕಟರಾವ್ ಸಭಾಭವನದಲ್ಲಿ, 'ಸತ್ಯವೆಂಬ ಕೊರಲ ಗನೆ ಹಿಡಿದು' ಹಾಗೂ 'ಕಲಬುರ್ಗಿ ಕಲಿಸಿದ್ದು' ಕೃತಿ ಬಿಡುಗಡೆ ಕಾರ್ಯಕ್ರಮ ಆಯೋಜಿತವಾಗಿದೆ. ಎಂ.ಎಂ ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನ ಈ ಕಾರ್ಯಕ್ರಮ ಆಯೋಜಿಸಿದೆ. ಭಾಷಾ ವಿಜ್ಞಾನಿ, ಪದ್ಮಶ್ರೀ ಜಿ.ಎನ್ ದೇವಿ, ಕೃತಿಗಳನ್ನು ಬಿಡುಗಡೆಗೊಳಿಸಲಿದ್ದಾರೆ ಎಂದು, ಪ್ರತಿಷ್ಠಾನದ ಅಧ್ಯಕ್ಷ ವೀರಣ್ಣ ರಾಜೂರ ತಿಳಿಸಿದ್ದಾರೆ.

<><><>

**ಉಪ ಲೋಕಾಯುಕ್ತ, ನ್ಯಾಯಮೂರ್ತಿ, ಬಿ.ವೀರಪ್ಪ,** ಅವರು ಇಂದು, ಮೂರು ದಿನಗಳ ರಾಯಚೂರಿಗೆ ಭೇಟಿ ಹಿನ್ನೆಲೆ ನಗರಕ್ಕೆ ಆಗಮಿಸಿದ್ದು, ಬೆಳಗ್ಗೆ ಎಪಿಎಂಸಿ ಮಾರುಕಟ್ಟೆಗೆ ತೆರಳಿ ಪರಿಶೀಲನೆ ನಡೆಸಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>